# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 300 |
| 2 | ಸದಸ್ಯರ ಹೆಸರು | ಶ್ರೀ ಕೆ.ಹರೀಶ್‌ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸಬೇಕಾದ ದಿನಾಂಕ | 14.09.2022 |
| 4 | ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರದ ವಿವಿಧ ಯೋಜನೆಯಡಿ ನಿಗಧಿಪಡಿಸಿದ ಆದಾಯದ ಮಿತಿಗೆ ಅನುಗುಣವಾಗಿ ಫಲಾನುಭವಿಗಳು ಆಯಾ ಯೋಜನೆಗೆ ತಕ್ಕಂತೆ ಆದಾಯ ಪ್ರಮಾಣ ಪತ್ರವನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | - ಇಲ್ಲ -<br>ಆದಾಯ ಪ್ರಮಾಣ ಪತ್ರವನ್ನು ಪಡೆಯಲು ನಿಗದಿಪಡಿಸಿರುವ ದಾಖಲೆಗಳೊಂದಿಗೆ ಅರ್ಜಿದಾರರು ಸಲ್ಲಿಸುವ ಅರ್ಜಿಗಳನ್ನು ಅವರು ಹೊಂದಿರುವ ಆದಾಯದ ಆಧಾರದ ಮೇಲೆ ರಾಜಸ್ವ ನಿರೀಕ್ಷಕರು ಹಾಗೂ ಗ್ರಾಮ ಲೆಕ್ಕಾಧಿಕಾರಿಗಳು ಕ್ಷೇತ್ರ ಪರಿಶೀಲನೆ ಮಾಡಿ ನೀಡುವ ಶಿಫಾರಸ್ಸಿನ ಆಧಾರದ ಮೇಲೆ ವಿತರಣೆ ಮಾಡಲಾಗುತ್ತಿದೆ. |
| ಆ) | ಏಕರೂಪದ ಆದಾಯದ ಮಿತಿ ಪ್ರಮಾಣ ಪತ್ರವನ್ನು ಕಟ್ಟುನಿಟ್ಟಾಗಿ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ: | - ಇಲ್ಲ - |
| ಇ) | ಶಾಲಾ ವಿದ್ಯಾರ್ಥಿಗಳಿಗೆ ಕ್ಷಿಪ್ರ ಸಮಯದಲ್ಲಿ ಆದಾಯ ಸರ್ಟಿಫಿಕೇಟ್ ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಈ ಕುರಿತಂತೆ ಸರ್ಕಾರ ಕೈಗೊಂಡ ಕ್ರಮಗಳೇನು? | ಶಾಲಾ ವಿದ್ಯಾರ್ಥಿಗಳಿಗೆ ಸೂಕ್ತ ಸಮಯದಲ್ಲಿ ಆದಾಯ ಪ್ರಮಾಣ ಪತ್ರ ದೊರಕಲು ಅನುವಾಗುವಂತೆ ಇದನ್ನು ಸಕಾಲ ವ್ಯಾಪ್ತಿಗೆ ತರಲಾಗಿದೆ.<br>ಅದರಂತೆ, ದಿನಾಂಕ: 01.09.2021 ರಿಂದ 31.08.2022 ರವರೆಗೆ ಒಟ್ಟು 13,68,781 ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹಾಗೂ 8,95,927 ಆದಾಯ ಪ್ರಮಾಣ ಪತ್ರಗಳನ್ನು ಸಕಾಲ ಯೋಜನೆಯಡಿ ನಿಗಧಿತ ಸಮಯದಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ವಿತರಿಸಲಾಗಿರುತ್ತದೆ. ವಿವರವನ್ನು ಅನುಬಂಧದಲ್ಲಿ ನೀಡಿದೆ. |

**ಸಂಖ್ಯೆ: ಕಂಇ 71 ಎಜಿಎಸ್ 2022**

(ಆರ್. ಅಶೋಕ)
ಕಂದಾಯ ಸಚಿವರು